ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಗುತ್ತಿಗೆ ಪೌರ ಕಾರ್ಮಿಕರ ನೇರ ನೇಮಕಾತಿ ಹಾಗೂ ನೇರ ವೇತನ ಪಾವತಿ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

192 (21) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಗುತ್ತಿಗೆ ಪೌರ ಕಾರ್ಮಿಕರನ್ನು ನೇರ ನೇಮಕಾತಿ ಹಾಗೂ ನೇರ ವೇತನ ಪಾವತಿ ಅಡಿಯಲ್ಲಿ ನೇಮಕಾತಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆಯೇ ;

(ಆ) ಹಾಗಿದ್ದಲ್ಲಿ ನೇಮಕಾತಿಗೊಳಿಸಲು ಅವಶ್ಯವಿರುವ ಮಾನದಂಡಗಳೇನು ;

(ಇ) ಸದರಿ ಪೌರ ಕಾರ್ಮಿಕರಿಗೆ ನೇರ ನೇಮಕಾತಿ ಹಾಗೂ ನೇರ ವೇತನ ಪಾವತಿ ಜಾರಿಗೊಳಿಸಲು ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಜಾರಿಗೊಳಿಸಲು ಕ್ರಮವಹಿಸಲಾಗುವುದು ?